ಮೂಲ ದಾವಾ ಸಂಖ್ಯೆ 160/2023 ಪಿ ಡಬ್ಲ್ಯೂ 1

(ದಿನಾಂಕ 13-09-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಜೆ ಎಸ್ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ಪ್ರತಿವಾದಿಯರು ನಮ್ಮ ಬ್ಯಾಂಕಿಗೆ ನೀಡಿದ ಸಾಲದ ಅರ್ಜಿ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, Sanction memorandum ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, Pronote and take delivery letter to DPN ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, Agreement for agriculture loan ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, Deed of Hypothecation ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, Letter of undertaking ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, Letter of revival ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ನಮ್ಮ ವಕೀಲರ ಮೂಲಕ ಪ್ರತಿವಾದಿಯರಿಗೆ ನೀಡಿದ 3 ನೋಟೀಸಿನ ಕಚೇರಿ ಪ್ರತಿಗಳು, 4 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-8 ರಿಂದ 14 ಎಂದು, 1 ನೇ ಪ್ರತಿವಾದಿಗೆ ಕಳುಹಿಸಿದ ಆರ್ ಪಿ ಎ ಡಿ ನೋಟೀಸು ಜಾರಿಯಾಗದೇ ವಾಪಾಸ್ ಬಂದಿದ್ದು ಅದನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿದ್ದು ಇರುತ್ತದೆ. ಸದರಿ ನೋಟೀಸಿನ ಕವರನ್ನು ತೆರೆದ ನ್ಯಾಯಾಲಯದಲ್ಲಿ ತೆಗೆದು ನೋಡಲಾಗಿ ಅದರಲ್ಲಿರುವ ನೋಟೀಸನ್ನು ನಿಪಿ-15 ಎಂದು ಮತ್ತು ಕವರನ್ನು ನಿಪಿ-15 ಎ ಎಂದು ಗುರುತಿಸಲಾಯಿತು. 1 ನೇ ಪ್ರತಿವಾದಿಯ ಬ್ಯಾಂಕ್ ಖಾತೆಯ ಸ್ಟೇಟ್ ಮೆಂಟ್ ಹಾಜರುಪಡಿಸಿದ್ದು ಅದನ್ನು ನಿಪಿ-16 ಎಂದು ಗುರುತಿಸಲಾಯಿತು.

(1 ನೇ ಪ್ರತಿವಾದಿ ಹಾಜರಿದ್ದು, 2 ನೇ ಪ್ರತಿವಾದಿ ಮತ್ತು ಪ್ರತಿವಾದಿಯರ ಪರ ವಕೀಲರು ಗೈರುಹಾಜರಾಗಿರುತ್ತಾರೆ. ಪ್ರತಿವಾದಿಯರು ಯಾವುದೇ ಪ್ರತಿವಾದ ಪತ್ರ ಸಲ್ಲಿಸಿಲ್ಲವಾದ್ದರಿಂದ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ